# ವಾರ್ಡ್ ಸಭೆ ಸಂಖ್ಯೆ.43

ದಿನಾಂಕ:01.10.2022 ರಂದು ಸಮಯ 11:30 ಗಂಟೆಗೆ ವಾರ್ಡ್.ಸಂಖ್ಯೆ.50 ಮಾರಪ್ಪನಪಾಳ್ಯ ವಾರ್ಡ್ ಕಛೇರಿಯಲ್ಲಿ ವಾರ್ಡ್ ಕಮಿಟಿ ಸಭೆಯನ್ನು ಮಾನ್ಯ ನೋಡಲ್ ಅಧಿಕಾರಿ (ಕಾರ್ಯದರ್ಶಿಗಳು) ರವರ ಅಧ್ಯಕ್ಷತೆಯಲ್ಲಿ ಕರೆಯಲಾಗಿತ್ತು.

ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳು

1. ಶ್ರೀ ಎಸ್.ಆರ್ ಶ್ರೀನಿವಾಸ್ ನೋಡಲ್ ಅಧಿಕಾರಿ ರವರು, ವಾರ್ಡ್.ಸಂಖ್ಯೆ.50, ಮಾರಪ್ಪನಪಾಳ್ಯ. **(ಅಧ್ಯಕ್ಷರು)**
2. ಶ್ರೀ ಧನಂಜಯ ಜಿ.ಟಿ ಸಹಾಯಕ ಅಭಿಯಂತರರು, ವಾರ್ಡ್.ಸಂಖ್ಯೆ.50, ಮಾರಪ್ಪನಪಾಳ್ಯ. **(ಕಾರ್ಯದರ್ಶಿ)**
3. ಶ್ರೀ ಬಿ.ಆರ್ ಪುಟ್ಟಸ್ವಾಮಿ ಸದಸ್ಯರು.
4. ಡಾ॥ ಶ್ರೀ ಶಶಿಕುಮಾರ್ ಎಸ್.ಆರ್ ಆರೋಗ್ಯ ವೈಧ್ಯಾಧಿಕಾರಿಗಳು ಶಂಕರನಗರ ಪ್ರಾಥಮಿಕ ಆರೋಗ್ಯ ಕೇಂದ್ರ.
5. ಶ್ರೀ ಪ್ರದೀಪ್‌ಕುಮಾರ್ ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.50, ಮಾರಪ್ಪನಪಾಳ್ಯ.
6. ಶ್ರೀ ಶಿವರಾಂ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು,
7. ಶ್ರೀ ಜಿ.ಕೆ ವೆಂಕಟೇಶಯ್ಯ, ಕೆಲಸ ಪರಿವೀಕ್ಷಕರು, ವಾರ್ಡ್ ಸಂಖ್ಯೆ.50, ಮಾರಪ್ಪನಪಾಳ್ಯ.
8. ಶ್ರೀ ಮಹದೇವ ಗುತ್ತಿಗೆದಾರರು ಬೀದಿ ದೀಪ ಬಿ.ಬಿ.ಎಂ.ಪಿ
9. ಶ್ರೀ ರಾಜೇಶ್. ಸದಸ್ಯರು.
10. ಶ್ರೀ ವೈ.ಆರ್. ವೆಂಕಟೇಶ್ ಸದಸ್ಯರು,
11. ಶ್ರೀ. ಜಯಪಾಲ್, ಸದಸ್ಯರು
12. ಶ್ರೀ. ನಂಜೇಗೌಡ, ಸದಸ್ಯರು
13. ಶ್ರೀ ಡಾ॥ನಾಗೇಂದ್ರ ಸದಸ್ಯರು,
14. ಶ್ರೀ. ಎಂ. ಮಹದೇವ, ಸದಸ್ಯರು
15. ಶ್ರೀ ದಿನೇಶ್ ಕುಮಾರ್ ಸ.ಅ. (ಬೆಸ್ಕಾಂ)
16. ಶ್ರೀ ಮಹಂತೇಶ್, ನಂದಿನಿಲೇಔಟ್ ಪೋಲೀಸ್ ಠಾಣಾ
17. ಶ್ರೀ, ರಂಗಸ್ವಾಮಯ್ಯ.ಎನ್ ನಂದಿನಿಲೇಔಟ್ ಪೋಲೀಸ್ ಠಾಣಾ ಸಿಬ್ಬಂಧ್ಧಿ.
18. ಶ್ರೀ. ಛಾಯಾಪತಿ ಎಂ. ಕಿರಿಯ ಆರೋಗ್ಯ ಪರಿವೀಕ್ಷಕರು, ಬಿಬಿಎಂಪಿ
19. ಶ್ರೀ ಲೋಕೇಶ್ ಪಶುಸಂಗೋಪನ ಪರಿವೀಕ್ಷರು,

ಕಾರ್ಯದರ್ಶಿರವರು ಸಭೆಯಲ್ಲಿ ಹಾಜರಿದ್ದ ಸದಸ್ಯರನ್ನು, ಅಧಿಕಾರಿಗಳನ್ನು ಹಾಗೂ ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸಿದರು.

| ಕ್ರ.ಸಂ | ವಿವರಣೆ | ಕ್ರಮ |
|---|---|---|
| 01 | ಅಧ್ಯಕ್ಷರು ಹಿಂದಿನ ಸಭೆಯ ನಡವಳಿಗಳನ್ನು ಸಭೆಯಲ್ಲಿ ಹಾಜರಿದ್ದ ಸದಸ್ಯರಿಗೆ, ಅಧಿಕಾರಿಗಳಿಗೆ ಓದಿ ತಿಳಿಸಿದರು. | – |
| 02 | ಕಾರ್ಯದರ್ಶಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಮೊದಲ ಆದ್ಯತೆ ನೀಡಿ ಸಮಸ್ಯೆಯನ್ನು ತಿಳಿಸುವಂತೆ ಸಾರ್ವಜನಿಕರನ್ನು ಕೋರಿದರು. | – |
| 03 | ಸದಸ್ಯರು ವಾರ್ಡ್ ವ್ಯಾಪ್ತಿಯಲ್ಲಿ ಐಮಾಸ್ಟ್ ಗಳ ಸಮಸ್ಯಗಳ ಬಗ್ಗೆ ತಿಳಿಸಿದರು, ಈ ಐಮಾಸ್ಟ್ ಲೈಟ್‌ಗಳ ಸಮಸ್ಯೆಗಳ ಬಗೆ ಗುತ್ತಿದಾರರು 14 ಐಮಾಸ್ಟ್ ಲೈಟ್‌ಗಳು ರಿಪೇರಿಯಾಗಿದ್ದು 2 ಐಮಾಸ್ಟ್ ಲೈಟ್ ಕಂಬಗಳು ಮಾತ್ರ ಬಾಕಿ ಉಳಿದಿವೆ ಇವುಗಳನ್ನು ಮುಂದಿನ ಸಭೆಯೊಳಗೆ ರಿಪೇರಿ ಮಾಡಿಕೊಡುತ್ತೇನೆಂದು ತಿಳಿಸಿದರು , ಮಾಹಿತಿಯನ್ನು ಮುಂದಿನ ಸಭೆಗೆ ತಿಳಿಸಲಾಗುವುದು. | ಬೀದಿ ದೀಪ ಇಲಾಖೆ |
| 04 | ವಿಜಯಾನಂದನಗರ ಮುಖ್ಯರಸ್ತೆಯಲ್ಲಿರುವ ಆಂಜನೆಯಸ್ವಾಮಿ ದೇವಸ್ಥಾನದ ಬಳಿ ಇರುವ ಮನೆಗೆ ನೀರಿನ ಬಿಲ್ಲು ಹೆಚ್ಚಾಗಿ ಬಂದಿರುವುದರಿಂದ ಕಾರಣವೇನು ಎಂಬುದಕ್ಕೆ ಮಾಹಿತಿ ನೀಡಲು ಡಾ॥ ನಾಗೇಂದ್ರ ಕೋರಿರುತ್ತಾರೆ. ಇದರ ಬಗ್ಗೆ ಶ್ರೀ.ಸೋಮನಾಥ್, ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರು ಮುಂದಿನ ಸಭೆಗೆ ಸದರಿ ವಿಷಯದ ಬಗ್ಗೆ ವಿಸ್ತೃತವಾದ ವರದಿಯನ್ನು ಸಲ್ಲಿಸಲಾಗುವುದು ಎಂದು ಸಭೆಗೆ ತಿಳಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ. ಅಧಿಕಾರಿಗಳು |
| 05 | ಕಣ್ವ ಆಸ್ಪಿಟಲ್ ರಸ್ತೆ ಮತ್ತು ಟಯೋಟಾ ಶೋ ರೂಂ ರಸ್ತೆಗಳಲ್ಲಿ ವಾಹನಗಳನ್ನು ರಸ್ತೆಯ ಬದಿಯಲ್ಲಿಯೆ ನಿಲ್ಲಿಸಿರುವುವುದನ್ನು ತೆರವುಗೊಳಿಲು ಸಭೆಗೆ ಡಾ॥ನಾಗೇಂದ್ರರವರು ಮತ್ತು ಸಾರ್ವಜನಿಕರು ಕೋರಿದರು ಅದಕ್ಕೆ ಸಂಬಧಪಟ್ಟ ಪೊಲೀಸ್ ಅಧಿಕಾರಿಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ಮಹಿತಿ ನೀಡಲಾಗುವುದು ಎಂದು ತಿಳಸಿದರು | ಟ್ರಾಫಿಕ್ ಪೋಲೀಸ್ ರಾಜಾಜಿನಗರ |

| | | |
|---|---|---|
| 06 | ಗೌತಮನಗರದ ಬೆಳವಾಡಿ ಪ್ಯಾಕ್ಟ್ರಿ ಬಳಿ ಮ್ಯಾನ್ ಹೋಲ್ ದುರಸ್ತಿ ಮಾಡಲು ಶ್ರೀ ಜಯಪಾಲ್ ರವರು ಹಿಂದಿನ ಸಭೆಯಲ್ಲಿ ಕೋರಿರುತ್ತಾರೆ. ಅದಕ್ಕೆ ಶ್ರೀ.ಸೋಮನಾಥ್, ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರು ಗೌತಮನಗರದ ಮನೆಯ ನಿವಾಸಿಗಳು ಸಾನಿಟರಿ ಛೇಂಬರ್‌ಗಳನ್ನು ಸುಸುಜ್ಜಿತವಾಗಿ ನಿರ್ಮಿಸಿಕೊಂಡರೆ ಈ ಸಮಸ್ಯೆ ಬರುವುದಿಲ್ಲ ಎಂದು ಸಭೆಗೆ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್. ಎಸ್.ಬಿ ರವರು ತಿಳಿಸಿರುತ್ತಾರೆ ಆದರೆ ಸದಸ್ಯರುಗಳು ಕಾರ್ಯಪಾಳಕ ಅಭಿಯಂತರರು ಬಿ.ಡಬ್ಲ್ಯೂ.ಎಸ್. ಎಸ್.ಬಿ ರವರೊಂದಿಗೆ ಸ್ಥಳ ಪರಿವೀಕ್ಷಿಸಲು ಸಭೆಗೆ ಕೋರಿರುತ್ತಾರೆ. | ಬಿ.ಡಬ್ಲ್ಯೂ.ಎಸ್. ಎಸ್.ಬಿ ಇಲಾಖೆ |
| 07 | ಕೃಷ್ಣಾನಂದನಗರ ವೃತ್ತದಲ್ಲಿ ಬೆಳಿಗ್ಗೆ ಮತ್ತು ಸಾಯಂಕಾಲ ಶಾಲಾ ಸಮಯದಲ್ಲಿ ಪೊಲೀಸ್ ನಿರ್ವಹಣೆ ಅವಶ್ಯಕವಾಗಿರುತ್ತದೆ ಆದ್ದರಿಂದ ಸಂಬಂಧಪಟ್ಟ ಠಾಣೆಗೆ ವಿಷಯ ತಿಳಿಸಲು ಸಭೆಯಲ್ಲಿ ಒಕ್ಕೂರಲಾಗಿ ಎಲ್ಲಾ ಸದಸ್ಯರು ಮನವಿ ಮಾಡಿರುತ್ತಾರೆ. | ರಾಜಾಜಿನಗರ ಸಂಚಾರಿ ಠಾಣೆ |
| 08 | ಡಾ॥ ನಾಗೇಂದ್ರರವರು ನಂಜುಂಡೇಶ್ವರನಗರ 2ನೇ ಕ್ರಾಸ್‌ನಲ್ಲಿ ಒಂದು ಕಂಬ ಹಾಕಿ ಲೈಟ್ ಅಳವಡಿಸಬೇಕು ಎಂದು ತಿಳಿಸಿದರು ಇದರ ಬಗ್ಗೆ ಸಂಬಂಧಪಟ್ಟ ಅದಿಕಾರಿಗಳಿಗೆ ತಿಳಿಸಲಾಗಿದೆ | ಬೀದಿ ದೀಪ ಇಲಾಖೆ |
| 09 | ಅಂಗಡಿಗಳಿಗೆ ಪರವಾನಿಗೆ ನೀಡುವ ಬಗ್ಗೆ ವಿವರವಾದ ವರದಿಯನ್ನು ನೀಡಲು ಸಭೆಯಲ್ಲಿ ಡಾ॥ ನಾಗೇಂದ್ರರವರು ಕೋರಿರುತ್ತಾರೆ. | ಹಿರಿಯ ಆರೋಗ್ಯ ಪರಿವೀಕ್ಷಕರು |
| 10 | ಶ್ರೀ ಪುಟ್ಟಸ್ವಾಮಿ ಸದಸ್ಯರು ರವರು ಅಂತಿಮವಾಗಿ ಸಭೆಗೆ ಹಾಜರಿದ್ದ ಸದಸ್ಯರು, ಅಧಿಕಾರಿಗಳು ಮತ್ತು ಸಾರ್ವಜನಿಕರಿಗೆ ವಂದನೆಗಳು ಹೇಳುತ್ತಾ ಸಭೆಯನ್ನು ಮುಕ್ತಾಯಗೊಳಿಸಿದರು. | – |

ನೋಡಲ್ ಅಧಿಕಾರಿ

ವಾರ್ಡ್ ಕಮಿಟಿ, ವಾರ್ಡ್.ಸಂಖ್ಯೆ.50
ಮಾರಪ್ಪನಪಾಳ್ಯ